**All India Radio: Bangalore**
**National Bulletin In Kannada**
**08.04.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**08.04.2026 1.10 p.m.**

**<><><><>**

ಮುಖ್ಯಾಂಶಗಳು

1. ಅಮೆರಿಕ - ಇರಾನ್ ಕದನ ವಿರಾಮ ಘೋಷಣೆ ಬೆನ್ನಲ್ಲೆ ಕಚ್ಚಾ ತೈಲ ಬೆಲೆ ಇಳಿಕೆ, ಗರಿಗೆದರಿದ ಷೇರು ಮಾರುಕಟ್ಟೆ
2. ಅಸ್ಸಾಂ, ಕೇರಳ, ಪುದುಚೆರಿ ವಿಧಾನಸಭಾ ಚುನಾವಣೆ: ನಾಳೆ ಮತದಾನ
3. ರೆಪೊ ದರ ಯಾಥಾಸ್ಥಿತಿಯಲ್ಲಿ ಮುಂದುವರಿಕೆ; ಆರ್‌ಬಿಐ ಘೋಷಣೆ
4. ಐಪಿಎಲ್ ಟಿ-೨೦ ಕ್ರಿಕೆಟ್; ಇಂದಿನ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ - ಗುಜರಾತ್ ಟೈಟನ್ಸ್ ಹಣಾಹಣಿ

<><><><>

ಎರಡು ವಾರಗಳ ಕದನ ವಿರಾಮಕ್ಕೆ ಅಮೆರಿಕ ಮತ್ತು ಇರಾನ್ ಒಪ್ಪಿಗೆ ನೀಡಿವೆ. ಹಾರ್ಮುಜ್ ಜಲಸಂಧಿಯ ಮೂಲಕ ಹಡಗುಗಳ ಸಂಚಾರಕ್ಕೆ ಅವಕಾಶ ನೀಡಿದರೆ, ಅಮೆರಿಕ ಮತ್ತು ಇರಾನ್ ನಡುವೆ ಎರಡು ವಾರಗಳ ಕದನ ವಿರಾಮಕ್ಕೆ ಒಪ್ಪಿಗೆ ನೀಡಲಾಗುವುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಇದಕ್ಕೆ ಇರಾನ್ ಒಪ್ಪಿಗೆ ಸೂಚಿಸಿದ ಕಾರಣ ಕದನ ವಿರಾಮ ಜಾರಿಯಾಗಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಟ್ರಂಪ್, ಎರಡೂ ಕಡೆಯವರು, ದ್ವಿಪಕ್ಷೀಯ ಕದನ ವಿರಾಮಕ್ಕೆ ಒಪ್ಪಿಕೊಳ್ಳಬೇಕು ಎಂದು ಹೇಳಿದ್ದು, ಅಮೆರಿಕ ಈಗಾಗಲೇ ತನ್ನ ಮಿಲಿಟರಿ ಗುರಿಗಳನ್ನು ಸಾಧಿಸಿದೆ. ಸಂಘರ್ಷ ಪರಿಹಾರವಾಗುವ ಹಂತಕ್ಕೆ ಹತ್ತಿರವಾಗಬಹುದು ಎಂದು ಹೇಳಿದ್ದಾರೆ. ಮತ್ತೊಂದೆಡೆ, ಇರಾನ್ ವಿರುದ್ಧದ ದಾಳಿಗಳನ್ನು ನಿಲ್ಲಿಸಿದರೆ, ಇರಾನ್ ಕದನ ವಿರಾಮಕ್ಕೆ ಒಪ್ಪಲಿದೆ ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಘೋಷಿಸಿದರು. ಎರಡು ವಾರಗಳ ಅವಧಿಗೆ, ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಮಾರ್ಗ ಸಾಧ್ಯ ಎಂದು ಅವರು ಘೋಷಿಸಿದರು. ಇರಾನ್‌ನ ಸಶಸ್ತ್ರ ಪಡೆಗಳೊಂದಿಗೆ ಸಮನ್ವಯದ ಮೂಲಕ ಮತ್ತು ತಾಂತ್ರಿಕ ಮಿತಿಗಳನ್ನು ಸರಿಯಾಗಿ ಪರಿಗಣಿಸಿ ಇದು ನಡೆಯುತ್ತದೆ ಎಂದು ಅವರು ಹೇಳಿದ್ದರು.

<><><><>

ಅಮೆರಿಕ ಮತ್ತು ಇರಾನ್ ಎರಡು ವಾರಗಳ ಷರತ್ತುಬದ್ಧ ಕದನ ವಿರಾಮಕ್ಕೆ ಒಪ್ಪಿಕೊಂಡ ಬೆನ್ನಲ್ಲೇ ಜಾಗತಿಕ ತೈಲಬೆಲೆಗಳು ತೀವ್ರವಾಗಿ ಇಳಿಕೆಯಾಗಿವೆ. ಕಚ್ಚಾತೈಲ ಬೆಲೆ ೧೦೦ ಅಮೆರಿಕನ್ ಡಾಲರ್‌ನಿಂದ ೯೨.೩೦ ಅಮೆರಿಕನ್ ಡಾಲರ್‌ಗೆ ಇಳಿಕೆಯಾಗಿದೆ. ಈ ಮೂಲಕ ಶೇಕಡಾ ೧೫.೯ ರಷ್ಟು ಕುಸಿತ ಕಂಡಿದೆ. ಅಮೆರಿಕ ಆಡಳಿತವು ಈಗ ಇರಾನ್‌ನೊಂದಿಗೆ ನೇರ ಮಾತುಕತೆಗೆ ಸಿದ್ಧತೆ ನಡೆಸುತ್ತಿದೆ. ಅಮೆರಿಕಾದ ನಿಯೋಗದ ನೇತೃತ್ವವನ್ನು ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ವಹಿಸುವ ಸಾಧ್ಯತೆಯಿದೆ. ದೀರ್ಘಾವಧಿಯ ಒಪ್ಪಂದಕ್ಕೆ ನಿಯಮಗಳನ್ನು ಅಂತಿಮಗೊಳಿಸುವುದು ಸಭೆಯ ಉದ್ದೇಶವಾಗಿದೆ. ಈ ಕುರಿತ ಅಂತಿಮ ಘೋಷಣೆಯು ಅಮೆರಿಕ ಅಧ್ಯಕ್ಷರು ಅಥವಾ ಶ್ವೇತಭವನದಿಂದ ಬರಲಿದೆ ಎಂದು ಶ್ವೇತಭವನದ ಮಾಧ್ಯಮ ಕಾರ್ಯದರ್ಶಿ ಕ್ಯಾರೊಲಿನ್ ಲೀವಿಟ್ ತಿಳಿಸಿದ್ದಾರೆ.

<><><><>

ಅಮೆರಿಕ ಮತ್ತು ಇರಾನ್ ನಡುವೆ ಕದನ ವಿರಾಮ ಘೋಷಣೆಯಾದ ಬೆನ್ನಲ್ಲೇ ಷೇರು ಮಾರುಕಟ್ಟೆ ಗರಿಗೆದರಿದೆ. ಮುಂಬೈ ಷೇರುಮಾರುಕಟ್ಟೆಯಲ್ಲಿಂದು ಆರಂಭಿಕ ವಹಿವಾಟಿನಲ್ಲಿ ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೨ ಸಾವಿರದ ೭೭೫ ಅಂಕಗಳು ಏರಿಕೆಯೊಂದಿಗೆ ೭೭ ಸಾವಿರದ ೩೯೨ ಅಂಕಗಳಲ್ಲಿ ವಹಿವಾಟು ನಡೆಸಿದೆ. ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೮೧೫ ಅಂಕಗಳು ಏರಿಕೆಯೊಂದಿಗೆ ೨೩ ಸಾವಿರದ ೯೩೮ ಅಂಕಗಳ ವಹಿವಾಟು ನಡೆಸಿದೆ.

<><><><>

ಅಮೆರಿಕ ಮತ್ತು ಇರಾನ್ ನಡುವಿನ ಎರಡು ವಾರಗಳ ಕದನ ವಿರಾಮ ಘೋಷಣೆಯನ್ನು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಸ್ವಾಗತಿಸಿದ್ದಾರೆ. ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದಲ್ಲಿ ಭಾಗಿಯಾಗಿರುವ ಎಲ್ಲಾ ರಾಷ್ಟ್ರಗಳು ಅಂತಾರಾಷ್ಟ್ರೀಯ ಕಾನೂನಿನಡಿಯಲ್ಲಿ ತಮ್ಮ ಬಾಧ್ಯತೆಗಳನ್ನು ಪಾಲಿಸಬೇಕು ಎಂದು ಸಲಹೆ ನೀಡಿದ್ದಾರೆ. ಉಭಯ ರಾಷ್ಟ್ರಗಳು ಕದನ ವಿರಾಮದ ನಿಯಮಗಳನ್ನು ಪಾಲಿಸಬೇಕು ಎಂದು ಒತ್ತಾಯಿಸಿದ್ದಾರೆ. ಜನರ ಜೀವಗಳನ್ನು ರಕ್ಷಿಸಲು ಮತ್ತು ಮಾನವ ದುಃಖವನ್ನು ನಿವಾರಿಸಲು ಯುದ್ಧವನ್ನು ಕೊನೆಗೊಳಿಸುವ ತುರ್ತು ಅಗತ್ಯವಿದೆ ಎಂದು ಅವರು ಒತ್ತಿ ಹೇಳಿದ್ದಾರೆ.

<><><><>

ಅಸ್ಸಾಂ, ಕೇರಳ ಮತ್ತು ಕೇಂದ್ರಾಡಳಿತ ಪ್ರದೇಶವಾದ ಪುದುಚೆರಿಯ ವಿಧಾನಸಭಾ ಚುನಾವಣೆಯ ಮತದಾನ ನಾಳೆ ನಡೆಯಲಿದೆ. ವಿವಿಧ ರಾಜಕೀಯ ಪಕ್ಷಗಳ ನಾಯಕರು, ಅಭ್ಯರ್ಥಿಗಳು ಮತದಾರರನ್ನು ಸೆಳೆಯಲು ಮನೆ-ಮನೆ ಪ್ರಚಾರದಲ್ಲಿ ತೊಡಗಿದ್ದಾರೆ. ಅಸ್ಸಾಂನ ೧೨೬, ಕೇರಳದ ೧೪೦ ಮತ್ತು ಪುದುಚೇರಿಯ ೩೦ ಸ್ಥಾನಗಳಿಗೆ ನಾಳೆ ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ತಮಿಳುನಾಡಿನ ಎಲ್ಲಾ ೨೩೪ ಸ್ಥಾನಗಳಿಗೆ ಮತ್ತು ಪಶ್ಚಿಮ ಬಂಗಾಳದ ಮೊದಲ ಹಂತದ ೧೫೨ ಕ್ಷೇತ್ರಗಳಿಗೆ ಈ ತಿಂಗಳ ೨೩ ರಂದು ಮತದಾನ ನಡೆಯಲಿದೆ. ಎಲ್ಲಾ ರಾಜ್ಯಗಳ ಚುನಾವಣಾ ಫಲಿತಾಂಶ ಮೇ ೪ ರಂದು ಪ್ರಕಟವಾಗಲಿದೆ.

<><><><>

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಗೆ ಬಿಜೆಪಿ, ಒಬ್ಬ ಅಭ್ಯರ್ಥಿಯ ಆರನೇ ಪಟ್ಟಿಯನ್ನು ಬಿಡುಗಡೆ ಮಾಡಿದೆ. ರಾಕೇಶ್ ಸಿಂಗ್ ಕೋಲ್ಕತಾ ಬಂದರು ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ವಿಧಾನಸಭಾ ಚುನಾವಣೆ ಎರಡು ಹಂತಗಳಲ್ಲಿ ನಡೆಯಲಿದೆ. ಮೊದಲ ಹಂತದ ಚುನಾವಣೆ ಇದೇ ೨೩ ರಂದು ಮತ್ತು ಎರಡನೇ ಹಂತ ೨೯ ರಂದು ನಡೆಯಲಿದೆ.

<><><><>

ಭಾರತೀಯ ರಿಸರ್ವ್ ಬ್ಯಾಂಕ್- ಆರ್‌ಬಿಐ, ರೆಪೊ ದರವನ್ನು ಯಥಾಸ್ಥಿತಿಯಲ್ಲಿ ಮುಂದುವರಿಸಿದೆ. ಪ್ರಸಕ್ತ ಹಣಕಾಸು ವರ್ಷದ ಮೊದಲ  ದ್ವೈಮಾಸಿಕ ಹಣಕಾಸು ನೀತಿಯನ್ನು ಪ್ರಕಟಿಸಿದ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ, ಹಣಕಾಸು ನೀತಿ ಸಮಿತಿಯು ತಟಸ್ಥ ನಿಲುವಿನೊಂದಿಗೆ ರೆಪೊ ದರವನ್ನು ಶೇಕಡಾ ೫.೨೫ ರಲ್ಲಿಯೇ ಉಳಿಸಿಕೊಳ್ಳಲು ಸರ್ವಾನುಮತದಿಂದ ನಿರ್ಧರಿಸಿದೆ ಎಂದು ತಿಳಿಸಿದರು. ಕಳೆದ ಹಣಕಾಸು ವರ್ಷದಲ್ಲಿ ದೇಶದ ಜಿಡಿಪಿ ಶೇಕಡಾ ೭.೬ ರಷ್ಟಿದ್ದರೆ, ಪ್ರಸಕ್ತ ಹಣಕಾಸು ವರ್ಷದಲ್ಲಿ ಜಿಡಿಪಿ ಶೇಕಡಾ ೬.೯ ರಷ್ಟು ಇರುವ ಸಾಧ್ಯತೆಯಿದೆ ಎಂದು ಹಣಕಾಸು ನೀತಿ ಸಮಿತಿಯು ಅಂದಾಜಿಸಿದೆ.

**ಧ್ವನಿ: ಗವರ್ನರ್ ಸಂಜಯ್ ಮಲ್ಹೋತ್ರಾ ( ೨೮ ಸೆಕೆಂಡ್ಸ್)**

ಇಂಧನ ಬೆಲೆಗಳಲ್ಲಿನ ಇತ್ತೀಚಿನ ಏರಿಕೆಯು ಹಣದುಬ್ಬರಕ್ಕೆ ಅಪಾಯಕಾರಿಯಾಗಿ ಪರಿಣಮಿಸಿದೆ. ಪ್ರಸ್ತುತ ಹಣಕಾಸು ವರ್ಷದ ಹಣದುಬ್ಬರ ಶೇಕಡಾ ೪.೬ ರಷ್ಟು ಇರಲಿದೆ ಎಂದು ನೀರಿಕ್ಷಿಸಿರುವ ಹಣಕಾಸು ನೀತಿ ಸಮಿತಿಯು, ಜಾಗತಿಕ ಅನಿಶ್ಚಿತತೆಯಿಂದಾಗಿ ನಿರಂತರ ನಿಗಾ ಅಗತ್ಯ ಎಂದು ಸಲಹೆ ನೀಡಿದೆ.

<><><><>

ಬಾಂಗ್ಲಾದೇಶ ವಿದೇಶಾಂಗ ಸಚಿವ ಖಲೀಲುರ್ ರಹ್ಮಾನ್ ನವದೆಹಲಿಯಲ್ಲಿಂದು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಭಾರತಕ್ಕೆ ಮೂರು ದಿನಗಳ ಭೇಟಿಯಲ್ಲಿರುವ ಖಲೀಲುರ್ ರಹ್ಮಾನ್ ನಿನ್ನೆ ಸಂಜೆ ನವದೆಹಲಿಗೆ ಆಗಮಿಸಿದರು. ಭೇಟಿಯ ಸಮಯದಲ್ಲಿ ಅವರು, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಹಾಗೂ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರನ್ನು ಭೇಟಿಯಾಗಲಿದ್ದಾರೆ.  ಫೆಬ್ರವರಿಯಲ್ಲಿ ಬಿಎನ್‌ಪಿ ನೇತೃತ್ವದ ಸರ್ಕಾರ ಬಾಂಗ್ಲಾದೇಶದಲ್ಲಿ ಅಧಿಕಾರಕ್ಕೆ ಬಂದ ನಂತರ, ಬಾಂಗ್ಲಾದೇಶದ ಸಚಿವರೊಬ್ಬರು ನವದೆಹಲಿಗೆ ಭೇಟಿ ನೀಡುತ್ತಿರುವುದು ಇದೇ ಮೊದಲ ಬಾರಿಯಾಗಿದೆ.

<><><><>

ಪ್ರಧಾನಮಂತ್ರಿ ಮುದ್ರಾ ಯೋಜನೆ-ಪಿಎಂಎಂವೈ ೧೧ ವರ್ಷಗಳನ್ನು ಪೂರೈಸಿದೆ. ಈ ಯೋಜನೆಯನ್ನು ೨೦೧೫ರ ಏಪ್ರಿಲ್ ೮ ರಂದು ಪ್ರಾರಂಭಿಸಲಾಯಿತು. ಇದು ಸಣ್ಣ ಉದ್ಯಮಗಳು ಮತ್ತು ವ್ಯವಹಾರಗಳಿಗೆ ಹಣಕಾಸು ಒದಗಿಸುವ ಗುರಿಯನ್ನು ಹೊಂದಿರುವ ಕೇಂದ್ರ ಸರ್ಕಾರದ ಪ್ರಮುಖ ಕಾರ್ಯಕ್ರಮವಾಗಿದೆ. ಜಾಮೀನು ಭಾರವನ್ನು ನಿವಾರಿಸಿ ಮತ್ತು ಸಾಲ ಪಡೆಯುವ ಪ್ರಕ್ರಿಯೆಯನ್ನು ಸರಳಗೊಳಿಸುವ ಮೂಲಕ, ಮುದ್ರಾ ಯೋಜನೆ ತಳಮಟ್ಟದ ಉದ್ಯಮಶೀಲತೆಗೆ ಹೊಸ ಅಡಿಪಾಯವನ್ನು ಹಾಕಿದೆ. ೧೧ ವರ್ಷಗಳಲ್ಲಿ, ಪ್ರಧಾನ ಮಂತ್ರಿ ಮುದ್ರಾ ಯೋಜನೆಯು ಆರ್ಥಿಕ ಸೇರ್ಪಡೆಯ ಶಕ್ತಿ ಮತ್ತು ತಳಮಟ್ಟದ ನಾವೀನ್ಯತೆಯ ಬಲವನ್ನು ನಿರಂತರವಾಗಿ ಪ್ರದರ್ಶಿಸಿದೆ. ಬ್ಯಾಂಕ್‌ಗಳು, ದೊಡ್ಡ ಕಂಪನಿಗಳಿಗೆ ಅಜಾಗರೂಕವಾಗಿ ಸಾಲ ನೀಡುತ್ತಿದ್ದಾಗ, ಸಾಲ ಸೌಲಭ್ಯ ಪಡೆಯಬೇಕಾದ ಅರ್ಹರು ಅವಕಾಶವನ್ನು ಕಳೆದುಕೊಂಡರು. ಮುದ್ರಾ ಯೋಜನೆಯ ಅನುಷ್ಠಾನವು, ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿದೆ.

<><><><>

ಪ್ರಾದೇಶಿಕ ಮಟ್ಟದಲ್ಲಿ ಬೆಳವಣಿಗೆಯನ್ನು ವೇಗಗೊಳಿಸಲು ಕೇಂದ್ರ ಮತ್ತು ರಾಜ್ಯಗಳ ನಡುವೆ ಹೆಚ್ಚಿನ ಸಮನ್ವಯದ ಅಗತ್ಯವನ್ನು ನೀತಿ ಆಯೋಗದ ಹೆಚ್ಚುವರಿ ಕಾರ್ಯದರ್ಶಿ ರಾಜೀವ್ ಸಿಂಗ್ ಠಾಕೂರ್ ಒತ್ತಿ ಹೇಳಿದ್ದಾರೆ. ನವದೆಹಲಿಯಲ್ಲಿ ವೆಲ್ಡಿಂಗ್ ಮತ್ತು ಕಟಿಂಗ್ ತಂತ್ರಜ್ಞಾನಗಳ ಕುರಿತಾದ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ರಾಜೀವ್ ಠಾಕೂರ್, ನೀತಿ ಆಯೋಗದ

ಸಹಯೋಗದ ವೇದಿಕೆಗಳು ಮತ್ತು ನೀತಿ ಬೆಂಬಲವು ರಾಜ್ಯಗಳಲ್ಲಿ ಕೈಗಾರಿಕಾ ಬೆಳವಣಿಗೆಯನ್ನು ಹೆಚ್ಚಿಸುವಲ್ಲಿ ವೇಗವರ್ಧಕವಾಗಿ ಕಾರ್ಯನಿರ್ವಹಿಸುವುದನ್ನು ಮುಂದುವರಿಸುತ್ತದೆ ಎಂದರು.

<><><><>

ದೆಹಲಿ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್‌ನ ಇಂದಿನ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<><><><>

ಸ್ಪೇನ್‌ನ ಗ್ರಾನಡಾದಲ್ಲಿ ನಡೆದ ಐಎಸ್‌ಎಸ್‌ಎಫ್ ವಿಶ್ವಕಪ್‌ನ ಹತ್ತು ಮೀಟರ್ ಏರ್ ಪಿಸ್ತೂಲ್ ಮಿಶ್ರ ತಂಡ ಸ್ಪರ್ಧೆಯಲ್ಲಿ ಭಾರತೀಯ ಶೂಟರ್‌ಗಳಾದ ಪಾಲಕ್ ಗುಲಿಯಾ ಮತ್ತು ಮುಖೇಶ್ ನೆಲವಳ್ಳಿ ವಿಶ್ವದಾಖಲೆಯೊಂದಿಗೆ ಚಿನ್ನದ ಪದಕ ವಿಜೇತರಾಗಿದ್ದಾರೆ. ಈ ವರ್ಷದ ಆರಂಭದಲ್ಲಿ ನವದೆಹಲಿಯಲ್ಲಿ ನಡೆದ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಉಜ್ಬೇಕಿಸ್ತಾನದ ನಿಜಿನಾ ಮತ್ತು ಮುಖಮ್ಮದ್ ಕಮಲೊವ್ ಅವರ ೪೮೧.೩ ಅಂಕಗಳ ದಾಖಲೆಯನ್ನು ಹಿಂದಿಕ್ಕಿ ಈ ಜೋಡಿ ಫೈನಲ್‌ನಲ್ಲಿ ಒಟ್ಟು ೪೮೭.೭ ಅಂಕಗಳನ್ನು ಗಳಿಸಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>